ಈ) ಹೌದು. ಪ್ರತಿ ತಿಂಗಳ 5ನೇ ತಾರೀಕಿನೊಳಗೆ ವೇತನ ಪಾವತಿಯಾಗುವಂತೆ ಕ್ರಮ ಕೈಗೊಳ್ಳಲಾಗಿದೆ.

ಹಿಂದುಳಿದ ವರ್ಗಗಳ ಹಾಸ್ಟೆಲ್ ಕಟ್ಟಡಗಳು

207(293); ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರಪೇಟೆ)

ಅ) ಬಂಗಾರಪೇಟೆ ಕ್ಷೇತ್ರದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಎಷ್ಟು ಹಾಸ್ಟೆಲ್‌ಗಳಿವೆ. ಇವುಗಳಲ್ಲಿ ಸ್ವಂತ ಕಟ್ಟಡ ಹಾಗೂ ಬಾಡಿಗೆ ಕಟ್ಟಡಗಳೆಷ್ಟು;

ಆ) ಪ್ರತಿ ಹಾಸ್ಟೆಲ್‌ನಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ತರಗತಿವಾರು / ಜಾತಿವಾರು ವಿವರ ನೀಡುವುದು;

ಇ) ಸ್ವಂತ ಕಟ್ಟಡಗಳಿದ್ದಲ್ಲಿ ದುರಸ್ತಿಗಾಗಿ ಖರ್ಚು ಮಾಡಿದ ಮೊತ್ತ ಎಷ್ಟು;

ಈ) ಬಾಡಿಗೆ ಕಟ್ಟಡಗಳಿದ್ದಲ್ಲಿ ನೀಡಲಾದ ಬಾಡಿಗೆ ಮೊತ್ತ ಎಷ್ಟು;

ಉ) ಸ್ವಂತ ಕಟ್ಟಡಗಳು ಇಲ್ಲದಿರುವ ಕಡೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಬಂಗಾರಪೇಟೆ ಕ್ಷೇತ್ರದಲ್ಲಿ 2 ಮೆಟ್ರಿಕ್ ನಂತರದ ಮತ್ತು 3 ಮೆಟ್ರಿಕ್ ಪೂರ್ವ ಹೀಗೆ ಒಟ್ಟು 5 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತವೆ. ಇವುಗಳಲ್ಲಿ 2 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ 3 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತವೆ.

ಆ) 2014–15ನೇ ಸಾಲಿನಲ್ಲಿ ತಾಲ್ಲೂಕು ಹಂತದ ಆಯ್ಕೆ ಸಮಿತಿಯ ಮುಖಾಂತರ ವಿದ್ಯಾರ್ಥಿಗಳನ್ನು ವಿದ್ಯಾರ್ಥಿ ನಿಲಯಗಳಿಗೆ ಆಯ್ಕೆ ಮಾಡಬೇಕಾಗಿದ್ದು, ಇನ್ನೂ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿರುವುದಿಲ್ಲ.

ಬಂಗಾರಪೇಟೆ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ವಿವರ ಈ ಕೆಳಕಂಡಂತೆ ಇದೆ.

ಕ್ರ.ಸಂ.	ವಿದ್ಯಾರ್ಥಿ ನಿಲಯದ ಹೆಸರು	ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆ
1	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬಂಗಾರಪೇಟೆ ಟೌನ್.	35
2	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬಡಮಾಕನಹಳ್ಳಿ	50
3	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ದೊಡ್ಡಪನ್ನಾಂಡಹಳ್ಳಿ	50
4	ಮೆಟ್ರಿಕ್ ನಂತರದ ಮಹಿಳೆಯರ ವಿದ್ಯಾರ್ಥಿ ನಿಲಯ ಬಂಗಾರಪೇಟ್ ಟೌನ್.	100
5	ಮೆಟ್ರಿಕ್ ನಂತರದ ಪುರುಷ ವಿದ್ಯಾರ್ಥಿ ನಿಲಯ ಬಂಗಾರಪೇಟ್ ಟೌನ್.	100
	ಒಟ್ಟು	**335**

ಇ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬಂಗಾರಪೇಟೆ ಟೌನ್, ಕಟ್ಟಡದ ದುರಸ್ಥಿಗಾಗಿ ` 21.25 ಲಕ್ಷ ಹಣವನ್ನು ಖರ್ಚುಮಾಡಲಾಗಿದೆ.

ಈ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 3 ವಿದ್ಯಾರ್ಥಿ ನಿಲಯಗಳಿಗೆ ಮಾಹೆಯಾನ ಒಟ್ಟು ` 46050/–ಗಳನ್ನು ಬಾಡಿಗೆ ಪಾವತಿಸಲಾಗುತ್ತಿದೆ.

ಉ) ಆಯವ್ಯಯದ ಲಭ್ಯತೆ ಹಾಗೂ ನಿವೇಶನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಬಾಡಿಗೆ ಕಟ್ಟಡಗಳಲ್ಲಿರುವ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.

ಮೆಟ್ರಿಕ್ ನಂತರದ ಮಹಿಳೆಯರ ವಿದ್ಯಾರ್ಥಿ ನಿಲಯ, ಬಂಗಾರಪೇಟೆ ಈ ನಿಲಯದ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದೆ.

ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬಡಮಾಕನಹಳ್ಳಿ ಈ ನಿಲಯಕ್ಕೆ ಬಡಮಾಕನಹಳ್ಳಿ ಗ್ರಾಮದ ಸರ್ವೆ ನಂ: 245ರಲ್ಲಿ 11 ಗುಂಟೆ ಜಮೀನು ಮಂಜೂರಾಗಿರುತ್ತದೆ.

ಮೆಟ್ರಿಕ್ ನಂತರದ ಪುರುಷ ವಿದ್ಯಾರ್ಥಿ ನಿಲಯ, ಬಂಗಾರಪೇಟೆ ಟೌನ್ ಈ ನಿಲಯಕ್ಕೆ ಐನ್ನೋರಹೊಸಹಳ್ಳಿ ಗ್ರಾಮದ ಸರ್ವೆ ನಂ:128ರಲ್ಲಿ 4 ಎಕರೆ ಜಮೀನನ್ನು ಜಿಲ್ಲಾಧಿಕಾರಿಗಳು, ಕೋಲಾರ ಇವರು ಮಂಜೂರು ಮಾಡಿರುತ್ತಾರೆ. ಈ ನಿವೇಶನಗಳು ಸೂಕ್ತವಿರುವ ಬಗ್ಗೆ ಪರಿಶೀಲಿಸಿ ಸ್ವಂತ ಕಟ್ಟಡ ನಿರ್ಮಿಸಲು ಕ್ರಮವಹಿಸಲಾಗುವುದು.

ನ್ಯಾಯ ಬೆಲೆ ಅಂಗಡಿಗಳು

208(294); ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರ ಪೇಟೆ)

ಅ) ಬಂಗಾರಪೇಟೆ ಕ್ಷೇತ್ರದಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳೆಷ್ಟು;

ಆ) ಈ ಪೈಕಿ ಪರಿಶಿಷ್ಟ ಜಾತಿ/ಪಂಗಡ/ಅಂಗವಿಕಲರಿಗೆ ಮಂಜೂರಾದ ಅಂಗಡಿಗಳೆಷ್ಟು;

ಇ) 2014–15ನೇ ಸಾಲಿಗೆ ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

ಈ) ಇದ್ದಲ್ಲಿ ಬಂಗಾರಪೇಟೆ ಕ್ಷೇತ್ರದಲ್ಲಿ ಎಷ್ಟು ಹೊಸ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಉದ್ದೇಶಿಸಿದೆ;